## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಸಿ.ರಾಜ್ ಉಲ್ ಹುಸೇನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರ ವಿರುದ್ಧದ ದುರ್ನಡತೆ/ಕರ್ತವ್ಯ ಲೋಪದ ಬಗ್ಗೆ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ **D.O.No. Compt/ Uplok/BD/2766/2017/ARE-15,** ದಿನಾಂಕ:02.12.2021.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:02.12.2021 ರ ಅರೆ ಸರ್ಕಾರಿ ಪತ್ರದಲ್ಲಿ ಶ್ರೀ ಜಿ.ಎಸ್.ಮೋಹನ್, ತಳವಾರಹಳ್ಳಿ ಗ್ರಾಮ ಪಂಚಾಯಿತಿ, ಮೊಳಕಾಲ್ಮೂರು ತಾಲ್ಲೂಕು ನಿವಾಸಿ (ಇನ್ನು ಮುಂದೆ ದೂರುದಾರರು) ರವರು ತಮ್ಮ ದೂರಿನಲ್ಲಿ ಶ್ರೀ ಸಿ.ರಾಜ್ ಉಲ್ ಹುಸೇನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರ ವಿರುದ್ಧ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕೆಂದು ಮಾನ್ಯರ ಕಛೇರಿಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ಎದುರುದಾರರಾದ ಶ್ರೀ ಸಿ.ರಾಜ್ ಉಲ್ ಹುಸೇನ್, ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ತಾಲ್ಲೂಕು, ಹಿರೇಕೇರೆಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ತಳವಾರಳ್ಳಿ ಗ್ರಾಮದಲ್ಲಿ ಸ್ವೈಯದ್ ಲೇಔಟ್‌ನ ಮಾಲೀಕರೊಂದಿಗೆ ಶಾಮೀಲಾಗಿ ಯಾವುದೇ ತೆರಿಗೆ ವಿಧಿಸದೆ ಇ-ಸ್ವತ್ತು ನಮೂನೆಗಳನ್ನು ವಿತರಿಸಿ ಗ್ರಾಮ ಪಂಚಾಯಿತಿ ಅನುದಾನಕ್ಕೆ ನಷ್ಟ ಉಂಟು ಮಾಡಿರುತ್ತಾರೆ ಅಲ್ಲದೆ ಗ್ರಾಮ ಪಂಚಾಯಿತಿ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು ಕಾನೂನಿನ ನಿಯಮಗಳನ್ನು ಗಾಳಿಗೆ ತೂರಿ ಅಕ್ರಮ ಮಾಡಿರುವುದಾಗಿ ದೂರಿನ ಕುರಿತು.

ಎದುರುದಾರರು ಹಿರೇಕೇರೆಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಸಂಪೂರ್ಣ ಪ್ರಾಮಾಣಿಕತೆ, ಕರ್ತವ್ಯ ನಿಷ್ಠೆ ಇಲ್ಲದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966 ರ ನಿಯಮ 3(1) (i) ರಿಂದ (iii) ಅನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಂದು ತಿಳಿಸಿ ಸದರಿ ಎದುರುದಾರ ನೌಕರರ ವಿರುದ್ಧ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅನ್ವಯ ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಹಿಸಿಕೊಡುವಂತೆ ಮಾನ್ಯ ಉಪ ಲೋಕಾಯಕ್ತ ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಪರಿಶೀಲಿಸಲಾಗಿ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಹಾಯಕ ನಿರ್ದೇಶಕರು (ಗ್ರಾ.ಉ) ಹಾಗೂ ಸಹಾಯಕ ಲೆಕ್ಕಾಧಿಕಾರಿಗಳು ಪರಿಶೀಲನೆ ನಡೆಸಿ ಸಲ್ಲಿಸಿರುವ ವರದಿಯನ್ನಾದರಿಸಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಮೊಳಕಾಲ್ಮೂರು, ಚಿತ್ರದುರ್ಗ ರವರು ಲೋಕಾಯುಕ್ತ ಕಛೇರಿಗೆ ದಿನಾಂಕ:26.10.2018 ರಂದು

...2

ಸಲ್ಲಿಸಿರುವ ವರದಿಯಲ್ಲಿ ಹಾಗೂ ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರು ದಿನಾಂಕ:11.02.2021 ರಂದು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಮೊಳಕಾಲ್ಮೂರು, ಚಿತ್ರದುರ್ಗ ಜಿಲ್ಲೆ ರವರಿಗೆ ಸಲ್ಲಿಸಿರುವ ವರದಿಯಲ್ಲಿ ಎದುರುದಾರರು ಹಿರೇಕೆರೆಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ತಳವಾರಹಳ್ಳಿ ಗ್ರಾಮದಲ್ಲಿ ಸೈಯದ್ ಲೇಔಟ್‌ನ ಮಾಲೀಕರೊಂದಿಗೆ ಶಾಮೀಲಾಗಿ ಯಾವುದೇ ತೆರಿಗೆ ವಿಧಿಸದೆ ಇ-ಸ್ವತ್ತು ನಮೂನೆಗಳನ್ನು ವಿತರಿಸಿ ಗ್ರಾಮ ಪಂಚಾಯತಿ ಅನುದಾನಕ್ಕೆ ನಷ್ಟ ಉಂಟು ಮಾಡಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

ದೂರುದಾರರು ದೂರು ಹಾಗೂ ಕಡತದಲ್ಲಿರುವ ದಾಖಲೆಗಳನ್ನು ಪರಿಶೀಲಿಸಿದಾಗ, ಎದುರುದಾರರ ವಿರುದ್ಧ ವಿಚಾರಣೆ ನಡೆಸುವ ಸಂಬಂಧ ಮುಂದುವರಿಯುವುದು ಅಗತ್ಯ ಎಂದು ಕಂಡುಬಂದಿದ್ದು, ಸದರಿಯವರು ಸರ್ಕಾರಿ ನೌಕರರಿಗೆ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುವ ಹಿನ್ನಲೆಯಲ್ಲಿ ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ರವರ ಶಿಫಾರಸ್ಸಿನಂತೆ ಕರ್ನಾಟಕ ನಾಗರೀಕ ಸೇವಾ ನಿಯಮ 1957ರ ನಿಯಮ 14-ಎ ರನ್ವಯ ಶ್ರೀ ಸಿ.ರಾಜ್ ಉಲ್ ಹುಸೇನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧದ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರಿಗೆ ವಹಿಸಲು ನಿರ್ಣಯಿಸಿ, ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/166/ಗ್ರಾಪಂಕಾ/2021, ಬೆಂಗಳೂರು, ದಿನಾಂಕ:28.02.2022.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಸಿ.ರಾಜ್ ಉಲ್ ಹುಸೇನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರಡಿ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

M. M. 28/2/22

**(ಎಂ.ಎಂ.ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು**(ಪುಟ:1 ರಿಂದ 60 ರವರೆಗೆ ಮೂಲ ದಾಖಲೆಗಳನ್ನು, ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
6. ಶ್ರೀ ಸಿ.ರಾಜ್ ಉಲ್ ಹುಸೇನ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ, ಮೊಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

***********